**ಸಿ.ಸಿ. ನಂಬರಃ 3136/2025**

**ಸಾಕ್ಷಿಃ ಪಿ. ಡಬ್ಲ್ಯೂಃ 1**

**(ಇಂದು ತಾಃ 05-03-2026 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.)**

**(ಸಾಕ್ಷಿಯ ಸ್ವಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆಯಾಗಿ ಪರಿಗಣಿಸಲಾಗಿರುತ್ತದೆ)**

**ಮುಂದುವರೆದ ಪಾಟೀ ಸವಾಲುಃ ಆರೋಪಿ ಪರ ಶ್ರೀ ಪಿ.ಎಸ್.ಜಿ. ವಕೀಲರಿಂದ,**

ಹಿಂದಿನ ಸಾಲ ಕಟ್ ಬಾಕಿ ಇದ್ದರೆ, ಸದ್ರಿ ಸಾಲಗಾರಿನಿಗೆ ಇನ್ನೊಂದು ಹೊಸ ಸಾಲ ನೀಡುವುದಿಲ್ಲ. ಆರೋಪಿಯ ಹಿಂದಿನ ಸಾಲದ ಭದ್ರತೆಗಾಗಿ ಪಡೆದುಕೊಂಡಿದ್ದ ಸಹಿ ಮಾಡಿದ ನಿಪಿ-2 ಖಾಲಿ ಚೆಕ್ಕನ್ನು ಈ ಪ್ರಕರಣದಲ್ಲಿ ಹೆಚ್ಚಿನ ಮೊತ್ತ ನಮೂದಿಸಿ, ಸುಳ್ಳು ಕೇಸನ್ನು ಆರೋಪಿಯ ವಿರುದ್ಧ ದಾಖಲಿಸಿರುತ್ತೇವೆ ಎಂದರೆ ಸರಿಯಲ್ಲ. ಹೆಚ್ಚಿನ ಓದು, ಬರಹ ಬರದ ಆರೋಪಿಯಿಂದ ನಮಗೆ ಬೇಕಾದ ದಾಖಲಾತಿಗಳಿಗೆ ಸಹಿ ಪಡೆದುಕೊಂಡು ಈ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇವೆ ಎಂದರೆ ಸರಿಯಲ್ಲ. ದೂರಿನಲ್ಲಿ ಹೇಳಿದ ಸಾಲವನ್ನು ಆರೋಪಿ ಸಂಪೂರ್ಣವಾಗಿ ಮರುಪಾವತಿಸಿದ್ದರೂ ಸಹ, ಆರೋಪಿಗೆ ತೊಂದರೆ ಕೊಡುವ ಉದ್ದೇಶಕ್ಕಾಗಿ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇವೆ ಎಂದರೆ ಸರಿಯಲ್ಲ. ಆರೋಪಿಗೂ ಹಾಗೂ ಈ ಪ್ರಕರಣದಲ್ಲಿ ಹೇಳಿರುವ ಸಾಲದ ಮೊತ್ತಕ್ಕೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ನನ್ನ ಹೇಳಿಕೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ನ್ಯಾ.ದಂ., ಭಟ್ಕಳ.**